# <u>ಕರ್ನಾಟಕ ಸರ್ಕಾರದ ನಡುವಳಿಗಳು</u>

**ವಿಷಯ:-** ಶ್ರೀ ಪಿ.ಮಹೇಶ, ಅಂದಿನ ಸ.ಕಾ.ಇಂ., ಗ್ರಾ.ಕು.ನೀ&ನೈ ಉಪವಿಭಾಗ, ಹೆಚ್.ಡಿ.ಕೋಟೆ (ಪ್ರಸ್ತುತ ನಿವೃತ್ತ ಕಾರ್ಯಪಾಲಕ ಇಂಜಿನಿಯರ್) ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ – ಅಂತಿಮ ಆದೇಶ

**ಓದಲಾಗಿದೆ:-**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂ: ಇಎಸ್‌ಟಿ (1)/51/2013-14/11860, ದಿನಾಂಕ:05.12.2019
2. ಸರ್ಕಾರದ ಕಾರಣ ಕೇಳುವ ನೋಟೀಸ್ ದಿನಾಂಕ: 16.01.2020
3. ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ರವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ:18.02.2020
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 104 ಇಎನ್‌ಕ್ಯೂ 2019, ದಿನಾಂಕ:08.04.2020
5. ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿ ದಿ:05.10.2021

* * *

<u>ಪ್ರಸ್ತಾವನೆ</u>:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ನಿವೃತ್ತ ಕಾರ್ಯಪಾಲಕ ಇಂಜಿನಿಯರ್) ಇವರು ಮೊದಲನೇ ಹೆಂಡತಿ ಇದ್ದರೂ ಸಹ ಶ್ರೀಮತಿ ಎಸ್.ಮಮತ, ಮೈಸೂರು ಇವರನ್ನು ಎರಡನೇ ವಿವಾಹವಾಗಿರುವುದು ಹಾಗೂ ಸದರಿಯವರ ನಿವಾಸದ ಮೇಲೆ ರೆಪ್ಕೋ ಬ್ಯಾಂಕಿನಿಂದ ರೂ.20.00 ಲಕ್ಷಗಳ ಸಾಲವನ್ನು ಪಡೆದು ವೈಯಕ್ತಿಕ ಉದ್ದೇಶಗಳಿಗೆ ಬಳಸಿಕೊಂಡು ತಮಗೆ ಮೋಸ ಮಾಡಿರುತ್ತಾರೆಂದು ಶ್ರೀಮತಿ ಎಸ್.ಮಮತ ಇವರು ನೀಡಿರುವ ದೂರನ್ನಾಧರಿಸಿ ಶ್ರೀ ಪಿ.ಮಹೇಶ್, ಅಂದಿನ ಸ.ಕಾ.ಇಂ. ಇವರು ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ, ಶ್ರೀ ಪಿ.ಮಹೇಶ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಹೆಚ್.ಡಿ.ಕೋಟೆ (ಹಾಲಿ ನಿವೃತ್ತ ಕಾರ್ಯಪಾಲಕ ಇಂಜನಿಯರ್) ಇವರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡುಬಂದ ಹಿನ್ನಲೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆಯನ್ನು ಜರುಗಿಸಲು ನಿರ್ಧರಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (2)ರಂತೆ ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಶ್ರೀ ಪಿ.ಮಹೇಶ, ಅಂದಿನ ಸ.ಕಾ.ಇಂ. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗೆಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ.

ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಪರಿಗಣನಾರ್ಹ ಅಂಶಗಳು ಕಂಡುಬಾರದ ಕಾರಣ ಹಾಗೂ ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆಯಲು ಯಾವುದೇ ಪೂರಕ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ ಹಾಗಾಗಿ ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಆರೋಪಗಳ ಕುರಿತು ಸತ್ಯಾಸತ್ಯತೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಜೆ.ಎಸ್.ಸೋಮಶೇಖರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ತಾಂತ್ರಿಕ ಸಹಾಯಕರು, ಪಂ.ರಾ.ಇಂ. ವೃತ್ತ, ಮೈಸೂರು ಇವರನ್ನು ಮಂಡನಾಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957ರ ನಿಯಮ 11ರಡಿ ಇಲಾಖಾ ವಿಚಾರಣೆಯನ್ನು ನಡೆಸಿ, ಸಂಬಂಧಪಟ್ಟ ದಾಖಲೆಗಳೊಂದಿಗೆ ವಿಚಾರಣಾ ವರದಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಸರ್ಕಾರಕ್ಕೆ ಸಲ್ಲಿಸಿ, ಸದರಿಯವರ ವಿರುದ್ಧದ ಆರೋಪಗಳು ರುಜುವಾತಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಸರ್ಕಾರವು ವಿಚಾರಣಾಧಿಕಾರಿಗಳ ವಿಚಾರಣಾ ವರದಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಶ್ರೀ ಪಿ.ಮಹೇಶ, ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಪ್ರಮುಖವಾಗಿ ಎರಡು ಆರೋಪಗಳು ಕಂಡುಬಂದಿದ್ದು, ಮೊದಲನೇಯದಾಗಿ, ಆಪಾದಿತ ಸರ್ಕಾರಿ ನೌಕರರಿಗೆ ಈ ಮೊದಲೇ ಮದುವೆಯಾಗಿದ್ದರೂ ಸಹ ಶ್ರೀಮತಿ ಎಸ್.ಮಮತಾ ಎಂಬುವವರನ್ನು ಎರಡನೇ ವಿವಾಹವಾಗಿ ನಡತೆ ನಿಯಮಗಳನ್ನು ಉಲ್ಲಂಘಿಸಿದ ಬಗ್ಗೆ ಆರೋಪಿಸಲಾಗಿದೆ. ಸದರಿ ಆರೋಪಕ್ಕೆ ಸಂಬಂಧಿಸಿದಂತೆ, ವಿಚಾರಣಾಧಿಕಾರಿಗಳು ಶ್ರೀ ಪಿ.ಮಹೇಶ್ ಇವರು ಶ್ರೀಮತಿ ಎಸ್.ಮಮತಾ ಎಂಬುವವರನ್ನು ವಿವಾಹವಾಗಿರುವ ಬಗ್ಗೆ ಯಾವುದೇ ದಾಖಲೆಗಳು ಇರುವುದಿಲ್ಲವೆಂದು ಅಲ್ಲದೆ, ಶ್ರೀ ಎಸ್.ಮಮತಾ ಎಂಬುವವರಿಗೆ ಈ ಮೊದಲೇ ಮದುವೆಯಾಗಿದ್ದು, ಮೊದಲ ಪತಿಯಿಂದ ವಿಚ್ಛೇದನೆ ಪಡೆದಿರುವ ಬಗ್ಗೆ ಯಾವುದೇ ದಾಖಲೆಗಳಿರುವುದಿಲ್ಲವೆಂದು ಮತ್ತು ಶ್ರೀ ಪಿ.ಮಹೇಶ್ ಹಾಗೂ ಶ್ರೀಮತಿ ಎಸ್.ಮಮತಾ ಇವರ ಮದುವೆಯು ನೊಂದಾಯಿತ ಮದುವೆ ಆಗಿಲ್ಲದ ಕಾರಣ ಹಿಂದೂ ವಿವಾಹ ಕಾಯ್ದೆಯಡಿ ವಿವಾಹವೆಂದು ಮಾನ್ಯ ಮಾಡಲು ಅವಕಾಶವಿರುವುದಿಲ್ಲ. ಹಾಗಾಗಿ, ಸದರಿ ಆರೋಪವು ರುಜುವಾತಾಗಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ.

ಮುಂದುವರೆದು, ಸದರಿಯವರ ವಿರುದ್ಧ ಶ್ರೀಮತಿ ಎಸ್.ಮಮತಾ ಇವರ ನಿವಾಸವನ್ನು ಒತ್ತೆಯಾಗಿಟ್ಟು, 20.00 ಲಕ್ಷ ರೂ.ಗಳ ಸಾಲವನ್ನು ಪಡೆದು, ಅದನ್ನು ಹಿಂದಿರುಗಿಸದೇ ಮೋಸ ಮಾಡಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ, ಪರಿಶೀಲಿಸಿರುವ ದಾಖಲೆಗಳ ಪೈಕಿ Repco Bank ನ ದಾಖಲಾತಿಗಳಲ್ಲಿ ಶ್ರೀಮತಿ ಮಮತಾ ಇವರು ಮಹೇಶ್ ರವರನ್ನು ಗಂಡ ಎಂದು ನಮೂದಿಸಿ ಸಾಲ ಪಡೆಯಲು ಅರ್ಜಿ ಸಲ್ಲಿಸಿದ್ದು, ಸಾಲದ ಮೊತ್ತ ರೂ.20.00 ಲಕ್ಷಗಳು ಶ್ರೀಮತಿ ಎಸ್.ಮಮತಾ ಇವರ ಖಾತೆಗೆ ಜಮೆಯಾಗಿರುತ್ತದೆ. ಆದರೆ ಶ್ರೀಮತಿ ಎಸ್.ಮಮತಾ ಇವರು ತಮ್ಮ ಹೆಸರಿನಲ್ಲಿ ಬ್ಯಾಂಕ್ ನಿಂದ ಪಡೆದ ಸಾಲವನ್ನು ಆಪಾದಿತ ಸರ್ಕಾರಿ ನೌಕರರ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಮಾಡಿರುವ ಬಗ್ಗೆಯಾಗಲೀ ಅಥವಾ ಸದರಿ ಹಣವನ್ನು ಆಪಾದಿತರಿಗೆ ನೀಡಿದ ಬಗ್ಗೆ ಯಾವುದೇ ಪೂರಕ ದಾಖಲೆಗಳನ್ನು ಒದಗಿಸದ ಕಾರಣ ಸದರಿಯವರು ಆಕೆಗೆ ಮೋಸ ಮಾಡಿರುತ್ತಾರೆಂಬ ಆರೋಪದಲ್ಲಿ ಹುರುಳಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ.

ಹಾಗಾಗಿ, ವಿಚಾರಣಾಧಿಕಾರಿಯವರು ಸಲ್ಲಿಸಿರುವ ವರದಿಯಲ್ಲಿ ದಾಖಲೆಗಳು ಹಾಗೂ ಸಾಕ್ಷಿಗಳನುಸಾರ ಆರೋಪಗಳ ಕುರಿತು ನಿರ್ಣಯಿಸಿದ್ದು, ಯಾವುದೇ ಆಕ್ಷೇಪಣಾರ್ಹ ಅಂಶಗಳು ಕಂಡುಬರುವುದಿಲ್ಲ. ಆದ್ದರಿಂದ ವಿಚಾರಣಾಧಿಕಾರಿಯವರ ವರದಿಯನ್ನು ಒಪ್ಪಿ ಶ್ರೀ ಪಿ.ಮಹೇಶ್, ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಪ್ರಕರಣವನ್ನು ಈ ಹಂತಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 104 ಇಎನ್‌ಕ್ಯೂ 2019,**

**ಬೆಂಗಳೂರು ದಿನಾಂಕ : 18.02.2022**

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಪಿ.ಮಹೇಶ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾ.ಕು.ನೀ ಮತ್ತು ನೈ ಉಪವಿಭಾಗ, ಹೆಚ್.ಡಿ.ಕೋಟೆ (ಪ್ರಸ್ತುತ ನಿವೃತ್ತ ಕಾರ್ಯಪಾಲಕ ಇಂಜಿನಿಯರ್) ಇವರ ವಿರುದ್ಧದ ಆರೋಪಗಳು ಸಾಬೀತಾಗಿಲ್ಲದ ಕಾರಣ ಸದರಿಯವರನ್ನು ಪ್ರಕರಣದಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಅನುಸಾರ
ಮತ್ತು ಅವರ ಹೆಸರಿನಲ್ಲಿ
18/2
**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
18/02/2022

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 &2) / (ಆಡಿಟ್).
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಆಯುಕ್ತರು, ಗ್ರಾ.ಕು.ನೀ ಮತ್ತು ನೈ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ ಮತ್ತು ನೈ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದ), ಕೆ.ಆರ್.ಸರ್ಕಲ್, ಬೆಂಗಳೂರು.
7. ಶ್ರೀ ಜೆ.ಎಸ್.ಸೋಮಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1327, 11ನೇ ಮುಖ್ಯ ರಸ್ತೆ, ಜಿ.ಕೆ.ವಿ.ಕೆ., ಯಲಹಂಕ, ಬೆಂಗಳೂರು-65 (ಮೊ.9449162238)
8. ಅಧೀಕ್ಷಕ ಇಂಜಿನಿಯರ್, ಪಂ.ರಾ.ಇಂ. ವೃತ್ತ, ಮೈಸೂರು.
9. ತಾಂತ್ರಿಕ ಸಹಾಯಕ, ಪಂ.ರಾ.ಇಂ. ವೃತ್ತ, ಮೈಸೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ ಮತ್ತು ಸಿ), ವಿಕಾಸಸೌಧ.
11. ಸಂಬಂಧಪಟ್ಟ ಅಧಿಕಾರಿಗೆ.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಜಂಟಿ ಕಾರ್ಯದರ್ಶಿಗಳು, (ಆಡಳಿತ-1) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ
3. ಶಾಖಾ ರಕ್ಷಾ ಕಡತ / ವೆಬ್ ಸೈಟ್ ನಲ್ಲಿ ಪ್ರಕಟಿಸಲು.